ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಕೆ.ಎಫ್.ಡಿ.ಸಿ. ಮೀನು ಕ್ಯಾಂಟೀನ್‌ನಲ್ಲಿ ಶುಚಿತ್ವ ಕಾಪಾಡದೇ ಇರುವ ಬಗ್ಗೆ

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) -

45 (237) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೆಂಗಳೂರಿನ ಮುಖ್ಯ ಉದ್ಯಾನವನಗಳಲ್ಲೊಂದಾದ ಕಬ್ಬನ್ ಪಾರ್ಕ್‌ನಲ್ಲಿ ವಾಯುವಿಹಾರಕ್ಕೆಂದು ಬರುವ ಸಾರ್ವಜನಿಕರು ಹಾಗೂ ಹಿರಿಯ ನಾಗರೀಕರಿಗೆ ಅಲ್ಲಿರುವ ಕೆ.ಎಫ್.ಡಿ.ಸಿ. ಮೀನು ಕ್ಯಾಂಟೀನ್‌ನಲ್ಲಿ ಶುಚಿತ್ವ ಕಾಪಾಡದೆ ಉಳಿದ ತ್ಯಾಜ್ಯ ವಸ್ತುಗಳನ್ನು ವಿಲೇವಾರಿ ಮಾಡುತ್ತಿರುವುದರಿಂದ ಪರಿಸರ ಸ್ವಚ್ಛತೆ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದಿಂದ ನಡೆಸುತ್ತಿರುವ ಕ್ಯಾಂಟೀನ್‌ಗಳಲ್ಲಿ ತ್ಯಾಜ್ಯ ವಿಲೇವಾರಿಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕ್ಯಾಂಟೀನ್ ಇರುವ ಸ್ಥಳ ಯಾರ ಹಕ್ಕಿನಲ್ಲಿದೆ ; ಬೇರೆಯವರ ಹೆಸರಿನಲ್ಲಿದ್ದರೆ ಅವರು ಲೋಕೋಪಯೋಗಿ ಇಲಾಖೆಯ ಎಸ್.ಆರ್. ಪ್ರಕಾರ ಬಾಡಿಗೆ ಪಾವತಿಸುತ್ತಿದ್ದಾರೆಯೇ ; ಪಾವತಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?